# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:09/06/2021 ರಂದು ಬುಧವಾರ ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು Zoom Application Link ಮೂಲಕ ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಅಂತರ್ಜಾಲದ ಲಿಂಕ್ ಮುಖಾಂತರ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಸಭೆಯ ವಾರ್ಡ್ ಸಮಿತಿ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

ಹಾಜರಿದ್ದವರು:–

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ವಾರ್ಡ್ 145ಕ್ಕೆ ಸಂಬಂಧಪಟ್ಟಂತ AE,
3. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

*********

1. ಹೆಚ್. ಸಿದ್ದಯ್ಯ ರಸ್ತೆಯಲ್ಲಿರುವ ಅಭಯ ಆಶ್ರಮ ಕಟ್ಟಡದ ನೆಲ ಅಂತಸ್ತಿನಲ್ಲಿರುವ ಅಂಗಡಿಗಳಿಗೆ ಚರಂಡಿಯಿಂದ ಮಳೆನೀರು ನುಗ್ಗುತ್ತಿದ್ದು, ಇದನ್ನು ಸರಿಪಡಿಸಲು ಅಭಯ ಆಶ್ರಮದ ಶ್ರೀಮತಿ. ಸುಧಾ ರವರು ಕೋರಿದರು, ಇದಕ್ಕೆ ಸಂಬಂಧಿಸಿದಂತೆ ಸದರಿ ರಸ್ತೆಯ ಕಾಮಗಾರಿಯನ್ನು ರಸ್ತೆ ಮೂಲಭೂತ ಸೌಕರ್ಯ, ಬಿಬಿಎಂಪಿ ಮುಖ್ಯ ಕಛೇರಿ, ನರಸಿಂಹರಾಜ ಚೌಕ, ರವರಿಂದ ಕಾಮಗಾರಿಯನ್ನು ಪ್ರಾರಂಭಿಸಿದ್ದು, ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರಲಾಗುವುದೆಂದು ತಿಳಿಸಲಾಯಿತು.
2. ವಿಲ್ಸನ್‌ಗಾರ್ಡನ್ 8ನೇ ಮುಖ್ಯರಸ್ತೆಯ ಕಾಮಗಾರಿಯು ಪ್ರಾರಂಭಿಸಿದ್ದು, ಸದರಿ ರಸ್ತೆಯಲ್ಲಿರುವ ಫುಟ್‌ಪಾತ್ ಹಾಳಾಗದೇ ಇದ್ದರೂ ಕಿತ್ತು ಹಾಕಿ ಹೊಸದಾಗಿ ಪುನರ್ ನಿರ್ಮಾಣ ಮಾಡುತ್ತಿರುವುದನ್ನು ಶ್ರೀ. ಸುಭಾಷ್ ರವರು ತಿಳಿಸಿದ್ದು, ಸದರಿ ಕಾಮಗಾರಿಯನ್ನು ಯೋಜನೆ– ಕೇಂದ್ರ ವಿಭಾಗದಿಂದ ಕೈಗೊಂಡಿದ್ದು, ಸಂಬಂಧಿಸಿದವರ ಗಮನಕ್ಕೆ ತರುವುದಾಗಿ ತಿಳಿಸಲಾಯಿತು.



Scanned with CamScanner

3. ಶ್ರೀ. ಸುಭಾಷ್ ರವರು ಮಾತನಾಡಿ ವಿಲ್ಸನ್‌ಗಾರ್ಡನ್ 9ನೇ "ಎ" ಅಡ್ಡರಸ್ತೆಯು ತುಂಬಾ ಹಾಳಾಗಿದ್ದು, ತುರ್ತಾಗಿ ಕಾಮಗಾರಿ ಪ್ರಾರಂಭಿಸಲು ಕೋರಿದರು, ಸದರಿ ರಸ್ತೆಯಲ್ಲಿ ಒಳಚರಂಡಿ ಕಾಮಗಾರಿಯನ್ನು ಪ್ರಾರಂಭಿಸಬೇಕಾಗಿರುವುದರಿಂದ ರಸ್ತೆ ಡಾಂಬರೀಕರಣ ಕಾಮಗಾರಿಯನ್ನು ತಡೆ ಹಿಡಿಯಲಾಗಿದ್ದು, ತುರ್ತಾಗಿ ಎರಡೂ ಕಾಮಗಾರಿಗಳನ್ನು ಕೈಗೊಳ್ಳಲಾಗುವುದೆಂದ ಸಭೆಗೆ ತಿಳಿಸಲಾಯಿತು.

4. ಶ್ರೀ. ಶಂಕರ್ ರವರು ಮಾತನಾಡಿ ವಾರ್ಡಿನ ಅನೇಕ ಕಡೆಗಳಲ್ಲಿ ಮಣ್ಣಿನ ರಾಶಿಗಳು ಬಿದ್ದಿದ್ದು ತೆರವುಗೊಳಿಸಲು ಕೋರಿದರು, ಸಿಲ್ಟ್ ಅಂಡ್ ಟ್ರಾಕ್ಟರ್ ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಕಾರ್ಯಾದೇಶ ನೀಡಿದ ತಕ್ಷಣ ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಲಾಯಿತು.

5. ಶ್ರೀ. ಪುರುಷೋತ್ತಮ್ ರವರು ಮಾತನಾಡಿ ಆನೆ ಪಾರ್ಕ್‌ನಲ್ಲಿ ನಿರ್ವಹಣೆ ಹಾಗೂ ವಾಚ್‌ಮೆನ್ ಇಲ್ಲದೇ ಅನೈತಿಕ ಚಟುವಟಿಕೆಗಳು ನಡೆಯುತ್ತಿರುವುದಾಗಿ ಸಭೆಗೆ ತಿಳಿಸಿದರು. ಸದರಿ ವಿಷಯವನ್ನು ತೋಟಗಾರಿಕೆ ವಿಭಾಗದ ಶ್ರೀ. ಭೂದೇವಿ ಮೇಲ್ವಿಚಾರಕರಿಗೆ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

6. ಹೊಸೂರು ರಸ್ತೆಯ ಲಾಲ್‌ಬಾಗ್ ಗೇಟ್ ಬಳಿ ಇರುವ ಹಾಪ್‌ಕಾಮ್ಸ್ ಮುಂಭಾಗದಲ್ಲಿ ಫುಟ್‌ಪಾತ್ ಹಾಳಾಗಿದ್ದು, ಸದರಿ ಕಾಮಗಾರಿಯನ್ನು ನಿರ್ವಹಿಸಲು ರಸ್ತೆ ಮತ್ತು ಮೂಲಭೂತ ಸೌಕರ್ಯ ರವರಿಗೆ ಈ ಬಗ್ಗೆ ಗಮನ ಹರಿಸಲು ತಿಳಿಸಲಾಯಿತು.

7. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳ ನಿರ್ವಹಣೆ ಆಗುತ್ತಿಲ್ಲವೆಂದು ಸಭೆಗೆ ತಿಳಿಸಿದರು. ಸಂಬಂಧಿಸಿದಂತೆ ವಿದ್ಯುತ್ ವಿಭಾಗದವರನ್ನು ಕ್ರಮಕ್ಕಾಗಿ ಕೋರಲಾಯಿತು.

8. ಶ್ರೀ. ಕಿಶೋರ್ ಎಂಬುವವರು ಹರಿಲಕ್ಷ್ಮಿ ಥಿಯೇಟರ್ ಬಗ್ಗೆ ಮಾತನಾಡಿದರು. ಸಂಬಂಧಿಸಿದ ವಿಷಯವನ್ನು ವಲಯ ಆಯುಕ್ತರವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಲಾಯಿತು.



Scanned with CamScanner

9. ಶ್ರೀ. ಸಿ. ಪ್ರಭಾಕರ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹಾಗೂ ಹಸುಗಳ ಕಾಟ ಜಾಸ್ತಿಯಾಗಿರುತ್ತದೆ ಎಂದು ಸಭೆಗೆ ಗಮನಕ್ಕೆ ತಂದರು. ಸದರಿ ವಿಷಯವನ್ನು ಬೀದಿ ನಾಯಿ ಹಸುಗಳನ್ನು ಹಿಡಿಯುವ ಶ್ರೀ. ಸುರೇಶ್ ಮೊಬೈಲ್ ಸಂಖ್ಯೆ:9480685329 ರವರ ಗಮನಕ್ಕೆ ತರಲಾಯಿತು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು ಹಾಗೂ
ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner